**Akashvani : Bangalore**
**Regional Bulletin In Kannada**
**28.03.2025 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**28.03.2025 / 18.40 hrs**

**<><*<><>*><>**

ಮುಖ್ಯಾಂಶಗಳು

**<><*<><>*><>**

**೧. ರಾಜ್ಯದ ಎಲ್ಲ ನರ್ಸಿಂಗ್ ಕಾಲೇಜುಗಳಿಗೆ ವಿದೇಶಿ ಭಾಷಾ ತರಬೇತಿ**

**೨. ಬಂಡಿಪುರ ಅರಣ್ಯದಲ್ಲಿ ವಾಹನಗಳ ರಾತ್ರಿ ಸಂಚಾರ ನಿರ್ಬಂಧ ತೆರವಿಗೆ ಚರ್ಚಿಸಿ ನಿರ್ಧಾರ- ಅರಣ್ಯ ಸಚಿವ ಈಶ್ವರ್ ಖಂಡ್ರೆ**

**೩. ಸಾರಿಗೆ ನೌಕರರ ವೇತನ ಪರಿಷ್ಕರಣೆ; ಏಪ್ರಿಲ್ ೫ ರಂದು ಬೆಂಗಳೂರಿನಲ್ಲಿ ಸಭೆ**

**೪. ಹಾಲು, ವಿದ್ಯುತ್ ದರ ಏರಿಕೆ ವಿರುದ್ಧ ಬಿಜೆಪಿಯಿಂದ ರಾಜ್ಯಾದ್ಯಂತ ಹೋರಾಟ**

**<><*<><>*><>**

ರಾಜ್ಯದ ಎಲ್ಲ ನರ್ಸಿಂಗ್ ಕಾಲೇಜುಗಳಿಗೆ ವಿದೇಶಿ ಭಾಷಾ ತರಬೇತಿ ನೀಡಲಾಗುವುದು ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ತಿಳಿಸಿದ್ದಾರೆ.ಬೆಂಗಳೂರಿನಲ್ಲಿಂದು ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಸಚಿವರು. ಕೌಶಲ್ಯಪೂರ್ಣ ದಾದಿಯರು ಮತ್ತು ಸಂಬಂಧಿತ ಆರೋಗ್ಯ ವೃತ್ತಿಪರರಿಗೆ ಅಂತಾರಾಷ್ಟ್ರೀಯ ಬೇಡಿಕೆ ಹೆಚ್ಚಾಗಿದೆ. ಹೀಗಾಗಿ ಜಾಗತಿಕ ಮಟ್ಟದಲ್ಲಿ ಉದ್ಯೋಗಾವಕಾಶ ಹೆಚ್ಚಿಸಲು ವಿದೇಶಿ ಭಾಷಾ ಪ್ರಯೋಗಾಲಯಗಳ ಮೂಲಕ ವಿದೇಶ ಭಾಷಾ ತರಬೇತಿ ನೀಡಲಾಗುವುದು ಎಂದರು. ನರ್ಸಿಂಗ್ ವಿದ್ಯಾರ್ಥಿಗಳು, ತರಬೇತಿ ಅವಧಿಯಲ್ಲಿ ಜಪಾನೀಸ್, ಜರ್ಮನ್, ಇಟಾಲಿಯನ್ ಮತ್ತು ಇಂಗ್ಲೀಷ್ ಕಲಿಯುವ ಮೂಲಕ ವಿದೇಶಗಳಲ್ಲಿ ಉದ್ಯೋಗ ಪಡೆಯಲು ಹೆಚ್ಚಿನ ಅವಕಾಶ ದೊರೆಯಲಿದೆ ಎಂದು ತಿಳಿಸಿದರು. ಉತ್ತಮ ಗುಣಮಟ್ಟದ ಶಿಕ್ಷಣ, ಮೂಲಸೌಕರ್ಯ ಒದಗಿಸಲು ಸರ್ಕಾರ ಬದ್ಧವಾಗಿದೆ, ಕಳಪೆ ಗುಣಮಟ್ಟದ ಪ್ಯಾರಾ ಮೆಡಿಕಲ್ ಕಾಲೇಜು ಮುಚ್ಚಲು ಕ್ರಮ ವಹಿಸಲಾಗುವುದು ಎಂದರು.

**<><*<><>*><>**

ಬಂಡಿಪುರ ರಕ್ಷಿತಾರಣ್ಯದಲ್ಲಿ ವಾಹನಗಳ ರಾತ್ರಿ ಸಂಚಾರ ನಿರ್ಬಂಧ ತೆರವು ಕುರಿತು ಮುಖ್ಯಮಂತ್ರಿ ಹಾಗೂ ಕಾನೂನು ತಜ್ಞರೊಂದಿಗೆ ಸಮಾಲೋಚಿಸಿ, ಅಂತಿಮ ನಿರ್ಧಾರ ಕೈಗೊಳ್ಳಲಾಗುವುದು ಎಂದು ಅರಣ್ಯ ಸಚಿವ ಈಶ್ವರ್ ಖಂಡ್ರೆ ತಿಳಿಸಿದ್ದಾರೆ. ದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಸ್ತುತ ಈ ಪ್ರಕರಣ ಸರ್ವೋಚ್ಚ ನ್ಯಾಯಾಲಯದಲ್ಲಿದೆ. ಈಗ ರಾತ್ರಿ ೯ ರಿಂದ ಬೆಳಗ್ಗೆ ೬ ಗಂಟೆಯವರೆಗೆ ನಿರ್ಬಂಧ ಜಾರಿಯಲ್ಲಿದೆ. ಕೇರಳ ಹಾಗೂ ಕರ್ನಾಟಕ ರಾಜ್ಯಗಳ ಬಾಂಧವ್ಯವನ್ನು ಗಮನದಲ್ಲಿಟ್ಟುಕೊಂಡು ನಿರ್ಬಂಧ ತೆರವಿಗೆ ಎಲ್ಲರೊಂದಿಗೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು. ಇದೇ ವೇಳೆ ರಾಜ್ಯದಲ್ಲಿ ಹಾಲಿನ ದರ ಏರಿಕೆ

ಕುರಿತು ಪ್ರತಿಕ್ರಿಯಿಸಿದ ಸಚಿವರು, ಬೇರೆ ರಾಜ್ಯಗಳಿಗೆ ಹೋಲಿಸಿದರೆ, ಕರ್ನಾಟಕದಲ್ಲಿ ದರ ಕಡಿಮೆ ಇದೆ. ರೈತರಿಗೆ ನೆರವಾಗಲು ಸರ್ಕಾರ ಈ ನಿರ್ಧಾರ ಕೈಗೊಂಡಿದೆ ಎಂದರು.

**<><*<><>*><>**

ವಾಯುವ್ಯ ಕರ್ನಾಟಕ ಸಾರಿಗೆ ವಿಭಾಗಕ್ಕೆ ನೂತನವಾಗಿ ೩೦೦ ಬಸ್‌ಗಳು ಶೀಘ್ರದಲ್ಲೇ ಸೇರ್ಪಡೆಯಾಗಲಿವೆ ಎಂದು ರಾಜ್ಯ ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಹೇಳಿದ್ದಾರೆ. ಉತ್ತರಕನ್ನಡ ಜಿಲ್ಲೆಯ ಶಿರಸಿಯಲ್ಲಿಂದು ನೂತನ ಬಸ್ ನಿಲ್ದಾಣ ಹಾಗೂ ಆರ್.ಟಿ.ಓ ಕಚೇರಿಯನ್ನು ಉದ್ಘಾಟಿಸಿ ಮಾತನಾಡಿದ ಸಚಿವರು, ಆಯವ್ಯಯದಲ್ಲಿ ೨ ಸಾವಿರ ನೂತನ ಬಸ್ ಖರೀದಿಗೆ ಮುಖ್ಯಮಂತ್ರಿ ಅನುಮೋದನೆ ನೀಡಿದ್ದರು. ಅದರಲ್ಲಿ ಈಗ ೩೦೦ ಬಸ್ ಖರೀದಿಸಲಾಗಿದೆ. ಹಂತ ಹಂತವಾಗಿ ೪೦೦ ಬಸ್‌ಗಳು ಸೇರಿದಂತೆ ಒಟ್ಟು ೭೦೦ ಬಸ್ ಸೇರ್ಪಡೆಯಾಗಲಿವೆ ಎಂದರು. ಇಲಾಖೆಯಲ್ಲಿ ೯ ಸಾವಿರ ಸಿಬ್ಬಂದಿಗಳ ನೇಮಕಾತಿಗೆ ಕ್ರಮ ಕೈಗೊಳ್ಳಲಾಗಿದೆ. ಅಲ್ಲದೇ ಅನುಕಂಪದ ಆಧಾರದ ಮೇಲೆ ಒಟ್ಟು ೧ ಸಾವಿರ ಉದ್ಯೋಗ ನೀಡಲಾಗಿದೆ ಎಂದು ಸಚಿವ ರಾಮಲಿಂಗಾರೆಡ್ಡಿ ತಿಳಿಸಿದರು.

**<><*<><>*><>**

ಸಾರಿಗೆ ನೌಕರರ ವೇತನ ಪರಿಷ್ಕರಣೆ ಸಂಬಂಧ ಏಪ್ರಿಲ್ ೫ ರಂದು ಬೆಂಗಳೂರಿನಲ್ಲಿ ಸಭೆ ಕರೆಯಲಾಗಿದೆ ಎಂದು ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಅಧ್ಯಕ್ಷ ರಾಜು ಕಾಗೆ ಹೇಳಿದ್ದಾರೆ. ಹುಬ್ಬಳ್ಳಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಂಕ್ರಾಂತಿ ಹಬ್ಬದ ನಂತರ ಸಭೆ ನಡೆಯಬೇಕಿತ್ತು, ಕಾರಣಾಂತರಗಳಿಂದ ನಡೆದಿಲ್ಲ, ಹಾಗಾಗಿ ಬೆಂಗಳೂರಿನಲ್ಲಿ ಸಭೆ ನಡೆಸಿ ವೇತನ ಪರಿಷ್ಕರಣೆ ಕುರಿತು ನಿರ್ಣಯ ಕೈಗೊಳ್ಳಲಾಗುವುದು ಎಂದರು.

**ಧ್ವನಿ: ರಾಜು ಕಾಗೆ ( ೪೩ ಸೆಕೆಂಡ್‌ಗಳು)**

ರಾಜ್ಯದ ವಿವಿಧೆಡೆ ಹೊಸ ಬಸ್ ನಿಲ್ದಾಣ ನಿರ್ಮಾಣ, ಹೊಸ ಬಸ್ ಖರೀದಿ ಸೇರಿದಂತೆ ಪ್ರಯಾಣಿಕರಿಗೆ ವಿವಿಧ ಸೌಲಭ್ಯ ಕಲ್ಪಿಸಲಾಗುತ್ತಿದೆ ಎಂದು ತಿಳಿಸಿದರು.

**<><*<><>*><>**

ಹೆಣ್ಣು ಮಕ್ಕಳಿಗೆ ಶಿಕ್ಷಣ ನೀಡಿ ಅವರನ್ನು ಸಬಲೀಕರಣಗೊಳಿಸುವುದು ಪೋಷಕರ ಆದ್ಯ ಕರ್ತವ್ಯವಾಗಿದೆ ಎಂದು ಕೃಷಿ ಸಚಿವ ಎನ್.ಚೆಲುವರಾಯಸ್ವಾಮಿ ಹೇಳಿದ್ದಾರೆ. ಮದ್ದೂರಿನಲ್ಲಿಂದು ಆಯೋಜಿಸಿದ್ದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಸಿ ಮಾತನಾಡಿದ ಅವರು, ಹೆಣ್ಣು ಮಕ್ಕಳನ್ನು ಸಾಮಾಜಿಕ, ಆರ್ಥಿಕ, ಶೈಕ್ಷಣಿಕವಾಗಿ ಸಬಲರನ್ನಾಗಿ ಮಾಡುವುದು ಸರ್ಕಾರದ ಪ್ರಮುಖ ಉದ್ದೇಶವಾಗಿದ್ದು, ಗ್ರಾಮ ಪಂಚಾಯಿತಿ ತಾಲ್ಲೂಕು, ಪಂಚಾಯಿತಿ ಸೇರಿದಂತೆ ಇನ್ನೂ ಅನೇಕ ಕ್ಷೇತ್ರಗಳಲ್ಲಿ ಮಹಿಳೆಯರಿಗೆ ಮೀಸಲಾತಿಯನ್ನು ನೀಡಲಾಗಿದೆ ಎಂದು ತಿಳಿಸಿದರು. ಮಹಿಳೆಯರು ಪರಾವಲಂಬಿಗಳಾಗದೆ ಸ್ವಾವಲಂಬಿಗಳಾಗಿ ಬದುಕುಬೇಕು ಎಂದು ಹೇಳಿದರು. ಇದೇ ವೇಳೆ ಸಚಿವರು ಶಾಸಕರು ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಮಹಿಳಾ ಸಾಧಕಿಯರಿಗೆ ಸನ್ಮಾನಿಸಿ ಗೌರವಿಸಿದರು.

**<><*<><>*><>**

ರಾಜ್ಯದಲ್ಲಿ ಹಾಲು ಹಾಗೂ ವಿದ್ಯುತ್ ದರ ಏರಿಕೆ ವಿರುದ್ಧ ಬಿಜೆಪಿ ರಾಜ್ಯಾದ್ಯಂತ ಹೋರಾಟ ನಡೆಸಲಿದೆ ಎಂದು ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್.ಅಶೋಕ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದ ನಂತರ ಮೂರು ಬಾರಿ ಹಾಲಿ ದರವನ್ನು ಏರಿಕೆ ಮಾಡಲಾಗಿದೆ. ರೈತರಿಗೆ ಪ್ರೋತ್ಸಾಹ ಧನವನ್ನು ನೀಡಿಲ್ಲ ಎಂದು ಆರೋಪಿಸಿದರು. ಆಯ-ವ್ಯಯ ಮುಗಿದ ನಂತರ ದರ ಹೆಚ್ಚಳ ಮಾಡುವ ಮೂಲಕ ಜನಸಾಮಾನ್ಯರಿಗೆ ದಿನನಿತ್ಯದ ಜೀವನದ ಮೇಲೆ ಹೊರೆ ಹಾಕಲಾಗುತ್ತಿದೆ. ಯುಗಾದಿ ಹಬ್ಬದ ನಂತರ ಪ್ರತಿಭಟನೆಯ ದಿನಾಂಕ ನಿಗದಿಪಡಿಸಲಾಗುವುದು ಎಂದು ತಿಳಿಸಿದರು.

**<><*<><>*><>**

ಪ್ರಧಾನಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ಇಂದು ನಡೆದ ಕೇಂದ್ರ ಸಚಿವ ಸಂಪುಟ ಸಭೆಯಲ್ಲಿ, ಕೇಂದ್ರ ಸರ್ಕಾರಿ ನೌಕರರಿಗೆ ಹೆಚ್ಚುವರಿ ತುಟ್ಟಿ ಭತ್ಯೆ-ಡಿಎ ಮತ್ತು ಪಿಂಚಣಿದಾರರಿಗೆ ತುಟ್ಟಿ ಪರಿಹಾರ-ಡಿಆರ್ ಬಿಡುಗಡೆ ಮಾಡಲು ಅನುಮೋದನೆ ನೀಡಿದೆ. ಇದು ಮೂಲವೇತನ ಅಥವಾ ಪಿಂಚಣಿಯ ಅಸ್ತಿತ್ವದಲ್ಲಿರುವ ದರಕ್ಕಿಂತ ಶೇಖಡ ೨ ರಷ್ಟು ಹೆಚ್ಚಳವಾಗಿದೆ. ತುಟ್ಟಿ ಭತ್ಯೆ ಮತ್ತು ತುಟ್ಟಿ ಪರಿಹಾರ ಎರಡರ ಹೆಚ್ಚಳದಿಂದಾಗಿ ಬೊಕ್ಕಸಕ್ಕೆ ವಾರ್ಷಿಕ ಒಟ್ಟು ೬ ಸಾವಿರದ ೬೧೪ ಕೋಟಿ ೪ ಲಕ್ಷ ರೂಪಾಯಿಗಳ ಹೊರೆಬೀಳಲಿದೆ.  ಇದರಿಂದ ಸುಮಾರು ೪೮ ಲಕ್ಷ ೬೬ ಸಾವಿರ ಕೇಂದ್ರ ಸರ್ಕಾರಿ ನೌಕರರು ಮತ್ತು ೬೬ ಲಕ್ಷ ೫೫ ಸಾವಿರ ಪಿಂಚಣಿದಾರರಿಗೆ ಪ್ರಯೋಜನವಾಗಲಿದೆ.

**<><*<><>*><>**

ದಿವಂಗತ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮಶತಮಾನೋತ್ಸವದ ಅಂಗವಾಗಿ ಬಳ್ಳಾರಿಯ ಬಿಜೆಪಿ ಜಿಲ್ಲಾ ಕಚೇರಿಯಲ್ಲಿಂದು 'ಅಟಲ್ ಜಿ ವಿರಾಸತ್' ಕಾರ್ಯಕ್ರಮ ನಡೆಯಿತು. ವಿಧಾನ ಪರಿಷತ್ತಿನ ಮುಖ್ಯ ಸಚೇತಕ ಎನ್.ರವಿಕುಮಾರ್, ಅಟಲ್ ಜಿ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು. ಕಚೇರಿ ಆವರಣದಲ್ಲಿ ಅಟಲ್ ಜಿ ಅವರ ಬದುಕಿನ ಪ್ರಮುಖ ಘಟನಾವಳಿಗಳ ಭಾವಚಿತ್ರದ ಪ್ರದರ್ಶನ ಹಮ್ಮಿಕೊಳ್ಳಲಾಗಿತ್ತು. ಬೆಂಗಳೂರು ಗ್ರಾಮಾಂತರ ಜಿಲ್ಲೆ ದೊಡ್ಡಬಳ್ಳಾಪುರದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಜಿಲ್ಲಾ ಬಿಜೆಪಿ ಅಧ್ಯಕ್ಷ ಎಚ್.ರಾಮಕೃಷ್ಣಪ್ಪ, ಸಮಾಜಕ್ಕೆ ವಾಜಪೇಯಿ ಅವರು ನೀಡಿದ ಕೊಡುಗೆಗಳನ್ನು ಸ್ಮರಿಸಿದರು.

**<><*<><>*><>**

ಮಂಗಳೂರು ವಿಶ್ವವಿದ್ಯಾನಿಲಯದ ೪೩ನೇ ವಾರ್ಷಿಕ ಘಟಿಕೋತ್ಸವ ನಾಳೆ ನಡೆಯಲಿದೆ. ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಘಟಿಕೋತ್ಸವದ ಅಧ್ಯಕ್ಷತೆ ವಹಿಸಿ, ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಿದ್ದಾರೆ ಎಂದು ಮಂಗಳೂರು ವಿಶ್ವವಿದ್ಯಾನಿಲಯದ ಕುಲಪತಿ ಪ್ರೊಫೆಸರ್ ಪಿ.ಎಲ್.ಧರ್ಮ ತಿಳಿಸಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಘಟಿಕೋತ್ಸವದಲ್ಲಿ ಒಟ್ಟು ೬೪ ಮಂದಿ ವಿದ್ಯಾರ್ಥಿಗಳು ಡಾಕ್ಟರೇಟ್ ಪದವಿ  ಪಡೆಯಲಿದ್ದು, ಇದೇ ಮೊದಲ ಬಾರಿಗೆ ತೃತೀಯ ಲಿಂಗಿಯೂ ಸ್ನಾತಕೋತ್ತರ ಪದವಿಯಲ್ಲಿ ಉತ್ತೀರ್ಣರಾಗಿ ಪದವಿ ಸ್ವೀಕರಿಸಲಿದ್ದಾರೆ ಎಂದರು. ಸಮಾಜ ಸೇವಾ ಕ್ಷೇತ್ರದ ಸಾಧನೆಗಾಗಿ ಡಾ.ಎಂ.ಎನ್.ರಾಜೇಂದ್ರ ಕುಮಾರ್, ರೋಹನ್ ಮೊಂತೆರೋ ಮತ್ತು ಕನ್ಯಾನ ಸದಾಶಿವ ಶೆಟ್ಟಿ ಇವರುಗಳಿಗೆ ಗೌರವ ಡಾಕ್ಟರೇಟ್ ಪ್ರದಾನ ಮಾಡಲಾಗುತ್ತಿದೆ ಎಂದು ತಿಳಿಸಿದರು.

**<><*<><>*><>**

ಯೋಗ ಕ್ರೀಡೆಗೆ ಅತ್ಯುನ್ನತವಾದ ಕೊಡುಗೆ ನೀಡಿರುವ ಕ್ರೀಡಾಪಟುಗಳು ಅಥವಾ ಯೋಗ ಸಂಸ್ಥೆಗಳಿಗೆ ಪ್ರಧಾನ ಮಂತ್ರಿಗಳು ರಾಷ್ಟ್ರೀಯ ಮಟ್ಟ ಅಥವಾ ಅಂತಾರಾಷ್ಟ್ರೀಯ ಮಟ್ಟದ ಅತ್ಯುನ್ನತ ಯೋಗ ಪ್ರಶಸ್ತಿಯನ್ನು ಘೋಷಿಸಿದ್ದಾರೆ.ಅರ್ಜಿಗಳನ್ನು ಜಾಲತಾಣ https://innovateindia.mygov.in/pm-yoga-awards-2025ರಲ್ಲಿ

ಮಾರ್ಚ್ ೩೧ರೊಳಗೆ ಸಲ್ಲಿಸಲು ಅಂತಿಮ ದಿನಾಂಕವನ್ನು ನಿಗದಿಪಡಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ: ೯೪೮೦೮೮೬೫೫೧ ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ ಎಂದು ಉತ್ತರಕನ್ನಡ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**<><*<><>*><>**

ಗದಗ ಜಿಲ್ಲೆಯಲ್ಲಿ ತಂಬಾಕು ಮಾರಾಟ ನಿಯಂತ್ರಿಸುವ ನಿಟ್ಟಿನಲ್ಲಿ ಕೊಟ್ಪಾ ಕಾಯ್ದೆ ಪರಿಣಾಮಕಾರಿಯಾಗಿ ಅನುಷ್ಠಾನವಾಗಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಜಿಲ್ಲಾ ತಂಬಾಕು ನಿಷೇಧ ಕೋಶದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ಎಲ್ಲಾ ಅಂಗಡಿ ಮುಂಗಟ್ಟುಗಳ ಮುಂದೆ ಧೂಮಪಾನ ನಿಷೇಧ ಹಾಗೂ ೧೮ ವರ್ಷದೊಳಗಿನವರಿಗೆ ತಂಬಾಕು ನಿಷೇಧ ಕುರಿತ ನಾಮಫಲಕ ಬಿತ್ತರಿಸಬೇಕು ಎಂದು ತಿಳಿಸಿದರು.

**<><*<><>*><>**

ನಾಡಿನ ವಿವಿಧೆಡೆ ಇಂದು ಅಗ್ನಿ ಬನ್ನಿರಾಯಸ್ವಾಮಿ ಜಯಂತಿಯನ್ನು ಆಚರಿಸಲಾಯಿತು. ಮಡಿಕೇರಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಕೊಡಗು ಜಿಲ್ಲಾ ಪದವಿ ಪೂರ್ವ ಶಿಕ್ಷಣ ಇಲಾಖೆ ಉಪ ನಿರ್ದೇಶಕರಾದ ಮಂಜುಳ, ಅಗ್ನಿ ಬನ್ನಿರಾಯರಂತಹ ಮಹಾನ್ ಚೇತನಗಳ ಜೀವನಾದರ್ಶಗಳು ಮನುಕುಲದ ಹಾದಿಗೆ ಬೆಳಕಾಗಿದೆ ಎಂದು ನುಡಿದರು. ಅಗ್ನಿಬನ್ನಿರಾಯರು ಸಹ ಧರ್ಮ ರಕ್ಷಣೆಗಾಗಿ ಜನ್ಮಿಸಿದವರು ಎಂದು ಚಿತ್ರದುರ್ಗ ಜಿಲ್ಲಾ ಉಪವಿಭಾಗಾಧಿಕಾರಿ ಮಹಿಬೂಬ್ ಜಿಲಾನ್ ಹೇಳಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ೭.೩೫ ಕ್ಕೆ <>*><>**